ಕರ್ನಾಟಕ ವಿಧಾನ ಸಭೆ, ಸಂಶೋಧನಾ ಮತ್ತು ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE : 31/10/2019

# ಕಾಶ್ಮೀರ: ಕೇಂದ್ರಾಡಳಿತ ಶುರು

ನವದೆಹಲಿ (ಪಿಟಿಐ): ಜಮ್ಮು ಮತ್ತು ಕಾಶ್ಮೀರ ರಾಜ್ಯವು ಇತಿಹಾಸದ ಪುಟ ಸೇರಿದೆ. ಜಮ್ಮು-ಕಾಶ್ಮೀರ ಮತ್ತು ಲಡಾಖ್ ಬುಧವಾರ ಮಧ್ಯರಾತ್ರಿಯಿಂದ ಎರಡು ಪ್ರತ್ಯೇಕ ಕೇಂದ್ರಾಡಳಿತ ಪ್ರದೇಶಗಳಾಗಿವೆ.

ಐಎಎಸ್ ಅಧಿಕಾರಿ ಗಿರೀಶ್ ಚಂದ್ರ ಮುರ್ಮು ಅವರು ಜಮ್ಮು ಮತ್ತು ಕಾಶ್ಮೀರದ ಲೆಫ್ಟಿನೆಂಟ್ ಗವರ್ನರ್ ಆಗಿ ಶ್ರೀನಗರದಲ್ಲಿ ಗುರುವಾರ ಅಧಿಕಾರ ಸ್ವೀಕರಿಸಲಿದ್ದಾರೆ. ಅತ್ತ ಲೇಹ್‌ನಲ್ಲಿ ಲಡಾಖ್‌ನ ಲೆಫ್ಟಿನೆಂಟ್ ಗವರ್ನರ್ ಆಗಿ ಐಎಎಸ್ ಅಧಿಕಾರಿ ಆರ್.ಕೆ. ಮಾಥುರ್ ಅಧಿಕಾರ ವಹಿಸಿಕೊಳ್ಳಲಿದ್ದಾರೆ. ಜಮ್ಮು ಮತ್ತು ಕಾಶ್ಮೀರ ಹೈಕೋರ್ಟ್‌ನ ಮುಖ್ಯನ್ಯಾಯಮೂರ್ತಿ ಗೀತಾ ಮಿತ್ತಲ್ ಅವರು ಪ್ರಮಾಣವಚನ ಬೋಧಿಸಲಿದ್ದಾರೆ.

ದೇಶದ ಮೊದಲ ಗೃಹಸಚಿವ ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ ಜನ್ಮದಿನವಾದ ಅಕ್ಟೋಬರ್ 31ರಂದು ಇವು ಅಸ್ತಿತ್ವಕ್ಕೆ ಬರಲಿವೆ. ಪಟೇಲ್ ಅವರು 560 ಸಂಸ್ಥಾನಗಳನ್ನು ಭಾರತದ ಒಕ್ಕೂಟಕ್ಕೆ ಸೇರಿಸುವಲ್ಲಿ ಯಶಸ್ವಿಯಾಗಿದ್ದರು.

ಜಮ್ಮು ಮತ್ತು ಕಾಶ್ಮೀರ ಪುನರ್ ವಿಂಗಡಣೆ ಕಾಯ್ದೆ 2019 ಅನ್ನು ಸಂಸತ್ತು ಮೂರು ತಿಂಗಳ ಹಿಂದೆ ಅಂಗೀಕರಿಸಿತ್ತು. ಅದರ ಅನ್ವಯ ಎರಡು ಹೊಸ ಕೇಂದ್ರಾಡಳಿತ ಪ್ರದೇಶಗಳು ಕಾರ್ಯಾರಂಭ ಮಾಡಲಿವೆ.

6